**ಅಸಲು ದಾವೆ ಸಂ.274/2023** **ಡಿಡಬ್ಲ್ಯೂ -1**

**<u>ದಿನಾಂಕ 24-03-2026 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನುಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಿಂದಃಃ</u>**

ನಾನು 3ನೇ ಪ್ರತಿವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ಕೆಲವೊಂದು ದಾಖಲಾತಿಗಳನ್ನು ಹಾಜರು ಪಡಿಸಿರುತ್ತೇನೆ.

ಸಾಕ್ಷಿಯು ಕ್ಯೂಆರ್ ಕೋಡ್ ಉಳ್ಳ ದಿ.27-12-2004 ರ ದಾನ ಪತ್ರದ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಡಿ-1 ಎಂದು, ಸಾಕ್ಷಿಯು ಕ್ಯೂಆರ್ ಕೋಡ್ ಉಳ್ಳ ದಿ.05-07-2006 ರ ಕ್ರಯ ಪತ್ರದ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಡಿ-2 ಎಂದು, ಸಾಕ್ಷಿಯು ಪಹಣಿ ಪತ್ರಿಕೆಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಡಿ-3 ಮತ್ತು ನಿಡಿ-4 ಎಂದು ಗುರುತಿಸಲಾಯಿತು.

**<u>ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಸಮಯ ಕೋರಿದ್ದು ಸಮಯಾವಕಾಶ ನೀಡಲಾಯಿತು.</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು).**

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಸಿಂಧನೂರು.**